# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 698 |
| ಸದಸ್ಯರ ಹೆಸರು | : | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 13.12.2024 |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಪ್ರಸ್ತುತ ನೇಮಕಾತಿ ಹಂತದಲ್ಲಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳ ನೇಮಕಾತಿಗಾಗಿ ನಡೆಸುವ ಪರೀಕ್ಷೆಗೆ ನಿಗಧಿಪಡಿಸಿರುವ ಪಠ್ಯಕ್ರಮವೇನು; | ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಯು ಗ್ರೂಪ್-ಸಿ ಹುದ್ದೆಯಾಗಿರುತ್ತದೆ. ನೇರ ನೇಮಕಾತಿ ಕೋಟಾದ ಹುದ್ದೆಗಳಿಗೆ ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು, 2021 ರನ್ವಯ ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ಆಯ್ಕೆ ಮಾಡಲು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅವಕಾಶ ಕಲ್ಪಿಸಿರುವುದರಿಂದ ಗ್ರೂಪ್-ಸಿ ಹುದ್ದೆಗಳಿಗೆ ಸಂಬಂಧಿಸಿದಂತೆ ನಿಗದಿಪಡಿಸಿರುವ ಪಠ್ಯಕ್ರಮ ಈ ಕೆಳಕಂಡಂತಿದೆ.<br><br>ಪತ್ರಿಕೆ-1.- ಸಾಮಾನ್ಯ ಜ್ಞಾನ,<br>ಪತ್ರಿಕೆ-2.- 1) ಸಾಮಾನ್ಯ ಕನ್ನಡ 2) ಸಾಮಾನ್ಯ ಇಂಗ್ಲೀಷ್ 3) ಕಂಪ್ಯೂಟರ್ ಜ್ಞಾನ. |
| (ಆ) | ಈ ಪರೀಕ್ಷೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಗೆ ಸಂಬಂಧಿಸಿದ ನಿರ್ಧಿಷ್ಟ ಪತ್ರಿಕೆಯನ್ನು ಅಳವಡಿಸಿದ್ದಲ್ಲಿ, ಮುಂದೆ ಆಯ್ಕೆಯಾದ ಅಭ್ಯರ್ಥಿಯು ಇಲಾಖೆಯಲ್ಲಿ ಕಾರ್ಯನಿರ್ವಹಿಸಲು ಅನುಕೂಲವಾಗುವುದಿಲ್ಲವೇ; ನಿರ್ಧಿಷ್ಟ ಪತ್ರಿಕೆಯನ್ನು ಅಳವಡಿಸದೇ ಇರಲು ಕಾರಣವೇನು; (ವಿವರ ನೀಡುವುದು) | ಮೇಲ್ಕಂಡ ನಿಯಮಗಳನ್ವಯ ಪಠ್ಯಕ್ರಮ ನಿಗದಿಪಡಿಸಿರುವುದರಿಂದ ನಿರ್ದಿಷ್ಟ ಪತ್ರಿಕೆಯನ್ನು ಅಳವಡಿಸಲು ಸಾಧ್ಯವಾಗುವುದಿಲ್ಲ.<br><br>ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ನೇಮಕಾತಿ ಹೊಂದಿದ ನೌಕರರು ಕರ್ನಾಟಕ ಸಿವಿಲ್ ಸೇವಾ (ಸೇವಾ ಮತ್ತು ಕನ್ನಡ ಭಾಷಾ ಪರೀಕ್ಷೆಗಳು) ನಿಯಮಗಳು, 1974ರಲ್ಲಿ ಈ ವೃಂದಕ್ಕೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ 1. ಕಮ್ಯೂನಿಟಿ ಡೆವಲಪ್ ಮೆಂಟ್ ಭಾಗ-1 ಮತ್ತು 2. ಕಮ್ಯೂನಿಟಿ ಡೆವಲಪ್‌ಮೆಂಟ್ ಭಾಗ-2 ವಿಷಯದಲ್ಲಿ ತೇರ್ಗಡೆಯಾಗಲು ಅವಕಾಶ ಕಲ್ಪಿಸಿರುವುದರಿಂದ ಕಾಯ್ದೆ ಹಾಗೂ ನಿಯಮಗಳ ಬಗ್ಗೆ ತಿಳುವಳಿಕೆ ಹೊಂದಿ ಕಾರ್ಯನಿರ್ವಹಿಸಲು ಅನುಕೂಲವಾಗುತ್ತದೆ. |
| (ಇ) | ಮುಂಬರುವ ಹೊಸ ನೇಮಕಾತಿಗಳ ಪರೀಕ್ಷೆಯಲ್ಲಾದರೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಸಂಬಂಧಿಸಿದ ಪಠ್ಯಕ್ರಮವನ್ನು ನಿರ್ದಿಷ್ಟ ಪತ್ರಿಕೆಗೆ ಅಳವಡಿಸಬಹುದಲ್ಲವೇ? (ಈ ಕುರಿತು ಸ್ಪಷ್ಟನೆಯನ್ನು ನೀಡುವುದು) | ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದ ನೇರ ನೇಮಕಾತಿ ಕೋಟಾದ ಹುದ್ದೆಗಳಿಗೆ ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು, 2021 ರನ್ವಯ ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ಆಯ್ಕೆ ಮಾಡಲು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅವಕಾಶ ಕಲ್ಪಿಸಿರುವುದರಿಂದ ಈ ನಿಯಮಗಳನ್ವಯ ಪಠ್ಯಕ್ರಮ ನಿರ್ದಿಷ್ಟಪಡಿಸಿರುವುದರಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಸಂಬಂಧಿಸಿದ ಪಠ್ಯಕ್ರಮವನ್ನು ನಿರ್ದಿಷ್ಟ ಪತ್ರಿಕೆಯನ್ನಾಗಿ ಅಳವಡಿಸಲು ಸಾಧ್ಯವಾಗುವುದಿಲ್ಲ. |

ಸಂಖ್ಯೆ: ಗ್ರಾಅಪ 652 ಗ್ರಾಪಂಅ 2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.